**ದಿನಾಂಕ: 07.05.2022 ರಂದು 10-30 ಕ್ಕೆ ಡಾ. ಸುರೇಶ್, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-179 (ಶಾಖಾಂಬರಿನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-179ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 179ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಬೆಸ್ಕಾಂ ಅಭಿಯಂತರರು |
| ಸದಸ್ಯರುಗಳು | ಬಿಡಬ್ಲ್ಯೂಎಸ್‌ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಬೀದಿ ದೀಪ ನಿರ್ವಹಣಾ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ರಸ್ತೆ ಮೂಲಭೂತ ಸೌಕರ್ಯ (ದಕ್ಷಿಣ) |
| ಸದಸ್ಯರುಗಳು | ಯೋಜನೆ (ದಕ್ಷಿಣ) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಬೃಹತ್ ನೀರುಗಾಲುವೆ ಅಭಿಯಂತರರು |
| ಸದಸ್ಯರುಗಳು | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| ಸದಸ್ಯರುಗಳು | ನಾಗರೀಕ ಕಲ್ಯಾಣ ಸಂಘ |

## :ನಡಾವಳಿಯ ವರದಿ:

- ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಮನೋಹರ್ .ಡಿ, ಸಹಾಯಕ ಅಭಿಯಂತರರು ವಾರ್ಡ್ 179 ಶಾಖಾಂಬರಿನಗರ, ಜೆ.ಪಿ.ನಗರ ಉಪವಿಭಾಗ ರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಶಾಖಾಂಬರಿನಗರ ವ್ಯಾಪ್ತಿಯ ಹಲವು ಪ್ರದೇಶಗಳಲ್ಲಿ ಬೀದಿ ದೀಪಗಳು ದುರಸ್ತಿಗೊಂಡಿದ್ದು, ಅದನ್ನು ಸರಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು. **ಕ್ರಮ :- ಬೀದಿ ದೀಪ ನಿರ್ವಹಣೆ ವಿಭಾಗ**
- 46ನೇ ಅಡ್ಡರಸ್ತೆಯ 1ನೇ ಮುಖ್ಯರಸ್ತೆಯಿಂದ ಸಂಗಮ್ ಸರ್ಕಲ್‌ಗಳಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಕೋರಲಾಯಿತು **ಕ್ರಮ :- ಸಹಾಯಕ ಅಭಿಯಂತರರು ವಾರ್ಡ್ 179.**

- ಸಂಗಮ್ ಸರ್ಕಲ್‌ನಿಂದ 46ನೇ ಅಡ್ಡರಸ್ತೆವರೆಗೆ ಫುಟ್‌ಪಾತ್ ರಿಪೇರಿ ಮಾಡುವಂತೆ ಕ್ರಮ ಕೈಗೊಳ್ಳಲು ಸೂಚಿಸಲಾಯಿತು. **ಕ್ರಮ :- ಮೇಜರ್ ರೋಡ್**
- ಇತ್ತೀಚಿನ ದಿನಗಳಲ್ಲಿ ತುಂತುರು ಮಳೆಯಾಗುತ್ತಿರುವುದರಿಂದ ಸೊಳ್ಳೆಗಳು ಹೆಚ್ಚಾಗಿದ್ದು, ಸೊಳ್ಳೆ ನಿಯಂತ್ರಣ ಔಷಧಿ ಸಿಂಪಡಣೆಯನ್ನು ಮಾಡಿಸುವಂತೆ ಹಾಗೂ ಬೀದಿ ಬದಿ ವ್ಯಾಪಾರಿಗಳು, ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್‌ಗಳು ಉಪಯೋಗಿಸುತ್ತಿದ್ದು, ಇದನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಂಡು ದೋಷ ಕಂಡುಬಂದಲ್ಲಿ ದಂಡವನ್ನು ವಿಧಿಸುವಂತೆ ಹಾಗೂ ಕುಡಿಯುವ ನೀರಿನ ಮಾದರಿಗಳನ್ನು ಪರೀಕ್ಷಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.

  **ಕ್ರಮ :-ಆರೋಗ್ಯ ಇಲಾಖೆ, ಜೆ.ಪಿ.ನಗರ ಉಪ ವಿಭಾಗ**
- ಟ್ರಾನ್ಸ್‌ಫಾರ್ಮರ್‌ಗಳನ್ನು ಬೇರೆ ಕಡೆಗಳಲ್ಲಿ ಬದಲಿ ಮಾಡಲು ಹಾಗೂ ಸಿಂಗಲ್ ಪೋಲ್‌ಗಳನ್ನು ಅಳವಡಿಸುವಂತೆ ಕೋರಲಾಯಿತು. **ಕ್ರಮ :- ಬೆಸ್ಕಾಂ ಕಛೇರಿ.**
- ಕಸದ ಗಾಡಿಗಳಿಗೆ ಟಾರ್ಪಲಿನ್‌ಅನ್ನು ಹೊದಿಸುವಂತೆ, ಕಸದ ಗಾಡಿಗಳಿಗೆ ಮೈಕ್ ಇಲ್ಲದಿರುವುದು ಕಂಡು ಬಂದಿರುತ್ತದೆ. ಅಲ್ಲದೇ ಒಣ ಕಸ ಮತ್ತು ಹಸಿ ಕಸ ವಿಂಗಡಣೆ ಮಾಡುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.

  **ಕ್ರಮ :- ಎಸ್‌ಡಬ್ಲ್ಯೂಎಂ.**
- ಶಾಕಾಂಬರಿನಗರದ ಕೆಲವು ಪ್ರದೇಶದಲ್ಲಿ ವಾಟರ್ ಮೀಟರ್ ಕಳ್ಳತನವಾಗುವ ಬಗ್ಗೆ ತಿಳಿಸಿರುತ್ತಾರೆ. **ಕ್ರಮ:- ಬಿಡಬ್ಲ್ಯೂಎಸ್‌ಎಸ್‌ಬಿ ಹಾಗೂ ಜೆ.ಪಿ.ನಗರ ಪೊಲೀಸ್ ಠಾಣೆ(ಕಾನೂನು ಮತ್ತು ಸುವ್ಯವಸ್ಥೆ)**
- ವಾರ್ಡ್ ನಂ. 179ರ ಕೆಲವು ಕಡೆಗಳಲ್ಲಿ ಬ್ಲಾಕ್ ಸ್ಪಾಟ್‌ಗಳಲ್ಲಿ ಕಸದ ಸಮಸ್ಯೆಗಳು ಕಂಡುಬಂದಿದ್ದು, ಸರಿಯಾಗಿ ವಿಲೇವಾರಿ ಮಾಡಿರುವುದಿಲ್ಲ ಎಂಬುದಾಗಿ ತಿಳಿಸಿರುತ್ತಾರೆ.
  **ಕ್ರಮ :- ಎಸ್‌ಡಬ್ಲ್ಯೂಎಂ (ಜಯನಗರ)**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.
- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ಜೆ.ಪಿ.ನಗರ) ಉಪವಿಭಾಗದ ಶ್ರೀ ಮನೋಹರ್ ಡಿ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಕಾಂಬರಿನಗರ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು ವಾರ್ಡ್ 179
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ